RNU AIR DHARWAD

APRIL 14,2025

ALL INDIA RADIO- DHARWAD

PRADESH SAMACHARA (KANNADA) 12PM

ಆಕಾಶವಾಣಿ

ಪ್ರದೇಶ ಸಮಾಚಾರ

ಸಂವಿಧಾನ ಶಿಲ್ಪಿ ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 134 ನೇ ಜಯಂತಿ ಕಾರ್ಯಕ್ರಮವನ್ನು ನಾಡಿನಾದ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ರಾಜ್ಯಪಾಲ ಥಾವರಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ವಿಪಕ್ಷ ನಾಯಕ ಆರ್.ಅಶೋಕ್ ಸೇರಿದಂತೆ ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ.

<><><>

ಶತಮಾನಗಳಿಂದ ಅವಕಾಶ ವಂಚಿತ ಸಮುದಾಯಗಳಿಗೆ ಸಂವಿಧಾನದ ಮೂಲಕ ಘನತೆಯಿಂದ ಬದುಕುವ ಹಕ್ಕನ್ನು ನೀಡಿದವರು ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ತಮ್ಮ ಎಕ್ಸ್ ಖಾತೆಯ ಅಂಬೇಡ್ಕರ್ ಜಯಂತಿ ಶುಭಾಶಯವನ್ನು ತಿಳಿಸಿರುವ ಅವರು, ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಮೂಲಕ ಜಾತ್ಯಾತೀತ ಮತ್ತು ಸಮಾಜವಾದಿ ಪ್ರಜಾಪ್ರಭುತ್ವ ದೇಶ ಕಟ್ಟಲು ಶ್ರಮಿಸಿದವರು ಡಾಕ್ಟರ ಬಿ.ಆರ್ ಅಂಬೇಡ್ಕರ್. ಅವರು ಎಳೆದು ತಂದು ನಿಲ್ಲಿಸಿದ, ವಿಮೋಚನಾ ರಥವನ್ನು ಮುಂದಕ್ಕೆ ಒಯ್ಯಲು ನಾವೆಲ್ಲ ಕೈಜೋಡಿಸೋಣ ಎಂದಿದ್ದಾರೆ.

<><><>

ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ ಅವರು ಅಂಬೇಡ್ಕರ್ ಜಯಂತಿ ಸಂದರ್ಭ ತಮ್ಮ ಗೌರವ ನಮನಗಳನ್ನು ಸಲ್ಲಿಸಿದ್ದಾರೆ. ಸಮಾಜ ಸುಧಾರಕ, ಭಾರತ ರತ್ನ ಡಾಕ್ಟರ ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನ ರಚಿಸಿ ಭಾರತೀಯತೆ ಮತ್ತು ಸಾಮಾಜಿಕ ಭದ್ರತೆಗೆ ಸುಭದ್ರ ಅಡಿಪಾಯ ಹಾಕಿಕೊಟ್ಟ ಮಹಾನ್ ನಾಯಕರು. ಸಂವಿಧಾನದ ಮೂಲಕ ಸಮಾನತೆ ಮತ್ತು ಹಿಂದುಳಿದವರ ಅಭಿವೃದ್ದಿಗೆ ಸದಾ ಮೇಲ್ಪಂಕ್ತಿ ಹಾಕಿದ ನೇತಾರ ನಿಗೆ ಅವರ ಜನ್ಮದಿನೋತ್ಸವದಂದು ಅನಂತ ನಮನಗಳು ಎಂದಿದ್ದಾರೆ.

<><><>

ರಾಜ್ಯ ಸಮಾಜ ಕಲ್ಯಾಣ ಇಲಾಖೆ ಸಚಿವ ಎಚ್.ಸಿ ಮಹದೇವಪ್ಪ ಅವರು ತಮ್ಮ ಎಕ್ಸ್ ಖಾತೆಯಲ್ಲಿ ಅಂಬೇಡ್ಕರ್ ಜಯಂತಿ ಶುಭಾಶಯಗಳನ್ನು ಕೋರಿದ್ದು, ಗೌರವ ನಮನ ಸಲ್ಲಿಸಿದ್ದಾರೆ. ಭಾರತದ ಇತಿಹಾಸದಲ್ಲಿ, ರಾಜಕೀಯ ಸ್ವಾತಂತ್ರ್ಯಕ್ಕಾಗಿ ಸಾವಿರಾರು ಜನರು ತ್ಯಾಗ ಮಾಡಿದ್ದಾರೆ. ದೇಶದ ಸಾಮಾಜಿಕ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿದ ಏಕೈಕ ಮಹಾನ್ ಹೋರಾಟಗಾರ ಎಂದರೆ ಅದು ಬಾಬಾ ಸಾಹೇಬ್ ಅಂಬೇಡ್ಕರ್ ಅವರು. ಶೋಷಿತ ಸಮುದಾಯಗಳು ಮಾತ್ರವಲ್ಲದೆ ಇಡೀ ಜನ ಸಮುದಾಯಗಳು ಪರಸ್ಪರ ಐಕ್ಯತೆ, ಬಾಂಧವ್ಯ, ಪ್ರೀತಿ ಮತ್ತು ಸಮಾನತೆಯಿಂದ ಬದುಕುವುದೇ, ಮಹಾನ್ ಹೋರಾಟಗಾರರಿಗೆ ನಾವು ಸಲ್ಲಿಸುವ ಗೌರವವಾಗಿದೆ ಎಂದರು.

<><><>

ಧಾರವಾಡ ಆಕಾಶವಾಣಿ ಕೇಂದ್ರದಲ್ಲಿ ಅಂಬೇಡ್ಕರ್ ಜಯಂತಿ ಕಾರ್ಯಕ್ರಮ ಜರುಗಿತು. ಕೇಂದ್ರದ ಕಾರ್ಯಕ್ರಮ ಮುಖ್ಯಸ್ಥರಾದ ಶರಣಬಸವ ಚೋಳಿನ, ಕಾರ್ಯಕ್ರಮ ನಿರ್ವಾಹಕರಾದ ಮಂಜುಳಾ ಪುರಾಣಿಕ್ ಹಾಗೂ ಸಿಬ್ಬಂದಿ ಬಾಬಾ ಸಾಹೇಬ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಗೌರವ ಸಮರ್ಪಿಸಿದರು.  ಅಭಿಯಾಂತ್ರಿಕ ವಿಭಾಗದ ಉಪ ಮಹಾನಿರ್ದೇಶಕ ಡಾಕ್ಟರ್ ಅರುಣ್ ಪ್ರಭಾಕರ್ ಅವರು ಕಳುಹಿಸಿದ ಶುಭಾಶಯ ಸಂದೇಶವನ್ನು ವಾಚಿಸಲಾಯಿತು.

<><><>

ಅಂಬೇಡ್ಕರ್ ಜಯಂತಿ ಹಿನ್ನಲೆಯಲ್ಲಿ, ಚಿತ್ರದುರ್ಗ ನಗರದ ಅಂಬೇಡ್ಕರ್  ವೃತ್ತ ದಲ್ಲಿನ ಡಾಕ್ಟರ್ ಬಿ.ಆರ್ ಅಂಬೇಡ್ಕರ್ ಪುತ್ಥಳಿಗೆ ಜಿಲ್ಲಾಧಿಕಾರಿ ವೆಂಕಟೇಶ್ ಹಾಗೂ ಅಪರ ಜಿಲ್ಲಾಧಿಕಾರಿ ಕುಮಾರಸ್ವಾಮಿ ಅವರು ಪುಷ್ಪ ನಮನ ಸಲ್ಲಿಸಿದರು.

ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾದ ಅಂಬೇಡ್ಕರ್ ಭಾವ ಚಿತ್ರದ ಮೆರವಣಿಗೆಗೆ ಚಾಲನೆ ನೀಡಲಾಯಿತು. ಮೆರವಣಿಗೆಯಲ್ಲಿ ವಿವಿಧ ಇಲಾಖೆಯ ಸ್ತಬ್ದ ಚಿತ್ರಗಳ ಪ್ರದರ್ಶನ ಜರುಗಿತು. ವಿವಿಧ ಸಾಂಸ್ಕೃತಿಕ ಕಲಾತಂಡಗಳ ಕಲಾವಿದರು ಪಾಲ್ಗೊಂಡಿದ್ದರು.

<><><>

ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ, ಬೆಂಗಳೂರಿನ ಬಿ.ಆರ್.ಅಂಬೇಡ್ಕರ್ ಸಂಶೋಧನಾ ಸಂಸ್ಥೆ ಸಹಯೋಗದಲ್ಲಿ, 'ಭಾರತದ ಅಲಕ್ಷಿತ ಸಮುದಾಯಗಳಿಗೆ ಡಾಕ್ಟರ್ ಬಿ.ಆರ್.ಅಂಬೇಡ್ಕರ್ ಅವರ ಕೊಡುಗೆಗಳು' ವಿಷಯದ ಕುರಿತು, ಇಂದು ರಾಷ್ಟ್ರೀಯ ವಿಚಾರ ಸಂಕಿರಣ ಸುವರ್ಣ ಮಹೋತ್ಸವ ಭವನದಲ್ಲಿ, ಆಯೋಜಿಸಲಾಗಿದೆ. ಇತಿಹಾಸ ಮತ್ತು ಪ್ರಾಚ್ಯಶಾಸ್ತ್ರ ಅಧ್ಯಯನ ವಿಭಾಗದ ಪ್ರಾಧ್ಯಾಪಕ ಡಾಕ್ಟರ್ ಶಿಲಾಧರ ಮುಗಳಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಳ್ಳಲಿದ್ದಾರೆ.

<><><>

ಅಂಬೇಡ್ಕರ್ ಜಯಂತಿ ಹಿನ್ನಲೆ, ಧಾರವಾಡದ ರಾಣಿ ಕಿತ್ತೂರ ಚನ್ನಮ್ಮ ಉದ್ಯಾನವನದಲ್ಲಿ ಮಹಾನಗರ ಪಾಲಿಕೆ ವತಿಯಿಂದ ನಿರ್ಮಿತ, ಲೋಹದ ಮೇಲೆ ಚಿತ್ರಿಸಲಾದ ಸಂವಿಧಾನ ಪೀಠಿಕೆಯನ್ನು ಕಾರ್ಮಿಕ ಖಾತೆ ಸಚಿವ ಸಂತೋಷ್ ಲಾಡ್ ಲೋಕಾರ್ಪಣೆಗೊಳಿಸಲಿದ್ದಾರೆ.

<><><>

ಕನ್ನಡ ಚಿತ್ರರಂಗದ ಹಿರಿಯ ಹಾಸ್ಯ ನಟ, ರಂಗಕರ್ಮಿ ಬ್ಯಾಂಕ್ ಜನಾರ್ದನ ಇಂದು ಬೆಳಗಿನ ಜಾವ ಬೆಂಗಳೂರಿನಲ್ಲಿ ನಿಧನರಾದರು. ಅವರಿಗೆ 79 ವರ್ಷ ವಯಸ್ಸಾಗಿತ್ತು. 500 ಕ್ಕೂ ಹೆಚ್ಚಿನ ಸಿನಿಮಾಗಳಲ್ಲಿ ಅವರು ನಟಿಸಿದ್ದರು. ವಿಭಿನ್ನ ನಟನೆಯ ಮೂಲಕ ಅಪಾರ ಸಂಖ್ಯೆಯ ಅಭಿಮಾನಿಗಳನ್ನು ಹೊಂದಿದ್ದ, ಹಿರಿಯ ನಟ ಜನಾರ್ದನ ಅವರ ನಿಧನಕ್ಕೆ ಗಣ್ಯರು ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ.

<><><>

ಕಳೆದ 5ನೇ ತಾರೀಖು, ಕಾರವಾರ ನೌಕಾ ನೆಲೆಯಿಂದ, ಹೊರಟ ಐ.ಎನ್.ಎಸ್. ಸುನೈನಾ ನೌಕೆ, ಹಿಂದೂ ಮಹಾಸಾಗರದ ಎಲ್ಲೆ ಹಂಚಿಕೊಳ್ಳುವ, 9 ಮಿತ್ರ ರಾಷ್ಟ್ರಗಳ, 44 ನೌಕಾ ಸಿಬ್ಬಂದಿಯನ್ನು ಹೊತ್ತು, ಟಾಂಜೇನಿಯಾದ ದಾರ್-ಎಸ್- ಸಲಾಮ್ ಬಂದರು ತಲುಪಿದೆ. ಆರು ದಿನಗಳ ಸಮರಾಭ್ಯಾಸ ಇದೇ 18 ರಂದು ಸಂಪನ್ನಗೊಳ್ಳಲಿದೆ. ಮಿತ್ರ ರಾಷ್ಟ್ರಗಳೊಂದಿಗೆ ಕಡಲ ಭದ್ರತೆ ಮತ್ತು ಸಹಕಾರ ಹೆಚ್ಚಿಸುವ ಗುರಿ, ಹೊಂದಲಾಗಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.

<><><>